# AKKAMAHADEVI WOMEN'S UNIVERSITY, VIJAYAPURA

……………………………………………………………………

**DATE: 21-02-2018**

**ಪ್ರಕಟಣೆಯ ಕೃಪೆಗಾಗಿ…………**

**ವಿಜಯಪುರ:** ಮಹಿಳಾ ವಿಶ್ವವಿದ್ಯಾನಿಲಯದ ಎನ್‌ಎಸ್‌ಎಸ್ ಘಟಕಗಳು ಸಕ್ರೀಯವಾಗಿ ಕಾರ್ಯ ನಿರ್ವಹಿಸುವುದರ ಮೂಲಕ ರಾಜ್ಯ ಮತ್ತು ರಾಷ್ಟ್ರಮಟ್ಟದ ಪ್ರಶಸ್ತಿಗಳನ್ನು ಪಡೆದು ವಿಶ್ವವಿದ್ಯಾನಿಲಯಕ್ಕೆ ಕೀರ್ತಿ ತಂದಿರುವುದು ಹೆಮ್ಮೆಯ ಸಂಗತಿ ಎಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಹೇಳಿದರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಕನ್ನಡ ಅಧ್ಯಯನ ಕಟ್ಟಡದ ಸಭಾ ಭವನದಲ್ಲಿ ರಾಷ್ಟ್ರೀಯ ಸೇವಾ ಯೋಜನೆ 'ಎ' ಮತ್ತು ಮುಕ್ತ ಘಟಕದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಐದು ದಿನದ ವಾರ್ಷಿಕ ವಿಶೇಷ ಶಿಬಿರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಎನ್.ಎಸ್.ಎಸ್. ಸಂಯೋಜನಾಧಿಕಾರಿ ಡಾ.ಬಸವರಾಜ ಲಕ್ಕಣ್ಣವರ ಮಾತನಾಡಿ, ನನಗಾಗಿ ದೇಶ ಅಲ್ಲ ದೇಶಕ್ಕಾಗಿ ನಾನು ಎಂಬುವುದೇ ಎನ್‌ಎಸ್‌ಎಸ್‌ನ ಮೂಲ ಉದ್ದೇಶ. ಉತ್ತಮ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ನಮ್ಮ ಪ್ರಾತವೇನು ಎಂಬುವುದನ್ನು ಎನ್‌ಎಸ್‌ಎಸ್ ತಿಳಿಸಿಕೊಡುತ್ತದೆ ಎಂದರು.

ವಿದ್ಯಾರ್ಥಿಗಳ ವ್ಯಕ್ತಿತ್ವ ಬದಲಾಗುವಲ್ಲಿ ಎನ್‌ಎಸ್‌ಎಸ್ ಮಹತ್ವದ ಪಾತ್ರ ವಹಿಸುತ್ತದೆ. ಸಮಾಜದಲ್ಲಿರುವ ಪ್ರತಿಯೊಬ್ಬ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೆ ಎನ್‌ಎಸ್‌ಎಸ್ ಅನುಕೂಲವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕಾರ್ಯಕ್ರಮಧಿಕಾರಿ ಡಾ.ಎಂ. ನಾಗರಾಜ, ಡಾ.ಭಾಗ್ಯಶ್ರೀ ದೊಡಮನಿ, ಎನ್‌ಎಸ್‌ಎಸ್ ಸ್ವಯಂಸೇವಕಿಯರು, ವಿವಿಧ ವಿಭಾಗಗಳ ಸಂಶೋಧನಾ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ರೂಪಾ ಚಳಕೇರಿ ನಿರೂಪಿಸಿದರು. ತಯಬಾ ವಂದಿಸಿದರು.

////**ಫೋಟೋ ಕ್ಯಾಪ್ಷೆನ್**/////

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಕನ್ನಡ ಅಧ್ಯಯನ ಸಭಾ ಭವನದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಎ ಮತ್ತು ಮುಕ್ತ ಘಟಕದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಐದು ದಿನದ ವಾರ್ಷಿಕ ವಿಶೇಷ ಶಿಬಿರವನ್ನು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.**

2) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಕನ್ನಡ ಅಧ್ಯಯನ ಸಭಾ ಭವನದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಎ ಮತ್ತು ಮುಕ್ತ ಘಟಕದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಐದು ದಿನದ ವಾರ್ಷಿಕ ವಿಶೇಷ ಶಿಬಿರವನ್ನು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.




